**ಸಾಕ್ಷಿಯನ್ನು ದಿಃ 18.12.2025 ರಂದು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಪಾಟೀ ಸವಾಲುಃ ಅರ್ಜಿದಾರರ ಪರ ವಕೀಲರಿಂದಃ**

ನಾನು ಫೆಬ್ರವರಿ 2025 ರಿಂದ 2 ನೇ ಎದುರುದಾರರ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದೇನೆ. 1 ನೇ ಎದುರುದಾರರ ವಾಹನಕ್ಕೆ ನಮ್ಮ ಕಂಪನಿಯ ವಿಮೆ ಷರತ್ತುಗಳಿಗೆ ಒಳಪಟ್ಟು ಚಾಲ್ತಿಯಲ್ಲಿತ್ತು. ದಾಖಲಾತಿಗಳ ಆಧಾರದ ಮೇಲೆ ನ್ಯಾಯಾಲಯಕ್ಕೆ ನನ್ನ ಪ್ರಮಾಣ ಪತ್ರ ಸಲ್ಲಿಸಿರುತ್ತೇನೆ. 1 ನೇ ಎದುರುದಾರರಿಗೆ ನಾವು ನೋಟೀಸ್ ನೀಡಿದ್ದೇವೆ. ಅವರು ಅದಕ್ಕೆ ಉತ್ತರಿಸಿಲ್ಲ. ಸದರಿ ನೋಟೀಸ್ ಅನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿಲ್ಲ. ಹೆಲ್ಮೆಟ್ ಧರಿಸಿಲ್ಲ ಎಂದು ಪೋಲೀಸ್ ದಾಖಲೆಗಳಲ್ಲಿ ಎಲ್ಲಿಯೂ ದಾಖಲಾಗಿಲ್ಲ ಎಂದರೆ ಉದ್ದೇಶಪೂರ್ವಕವಾಗಿ ನಮೂದಿಸಿಲ್ಲ ಎನ್ನುತ್ತಾರೆ. ಡಿ.ಎಲ್ ಬಗ್ಗೆ ಸಂಬಂಧಪಟ್ಟ ಆರ್.ಟಿ.ಓ ರವರಿಗೆ ನ್ಯಾಯಾಲಯದ ಮುಖಾಂತರ ಸಮನ್ಸ್ ಮಾಡಿರುತ್ತೇವೆ. ಈ ಬಗ್ಗೆ ದಾಖಲೆ ಇಲ್ಲ. 1 ನೇ ಪ್ರತಿವಾದಿ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿದ ಕಾರಣ ಅಪಘಾತ ಆಗಿದೆ ಎಂದರೆ ಸರಿಯಲ್ಲ. ಪರಿಹಾರ ಕೊಡುವುದರಿಂದ ತಪ್ಪಿಸಿಕೊಳ್ಳಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅರ್ಜಿದಾರರು ಉತ್ತರಾಧಿಕಾರಿಗಳಲ್ಲ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಬಗ್ಗೆ ನಮ್ಮಲ್ಲಿ ದಾಖಲೆ ಇಲ್ಲ. ಪರಿಹಾರ ಭಾಧ್ಯತೆಯಿಂದ ತಪ್ಪಿಸಿಕೊಳ್ಳಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ., ಮೈಸೂರು.